**ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀಮತಿ.ಬಲ್ಕೀಸ್ ಬಾನು ಇವರ ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಮಾಹಿತಿ**

**ವಿಷಯ:** **ಬಾಲ್ಯ ವಿವಾಹ ತಡೆಗಟ್ಟುವ ಕಟ್ಟುನಿಟ್ಟಿನ ಕಾನೂನು ಇದ್ದರೂ ಸಹ ಬೆಳಗಾವಿ ಜಿಲ್ಲೆಯಲ್ಲಿ ಅಪ್ರಾಪ್ತ ಬಾಲಕಿ ಹೆರಿಗೆ ವಿಷಯಕ್ಕೆ ಸಂಬಂಧಿಸಿದಂತೆ ತಪ್ಪು ಮಾಹಿತಿ ನೀಡಿ ತಾಯಿ ಕಾರ್ಡ್ ನೀಡಿಸಲು ಸಹಕರಿಸಿರುವ ಮಕ್ಕಳ ರಕ್ಷಣಾ ಘಟಕ ಮತ್ತು ಆಶಾ ಕಾರ್ಯಕರ್ತೆಯರ ಕರ್ತವ್ಯ ಲೋಪದ ಬಗ್ಗೆ.**

**ಉತ್ತರ**

ಬೆಳಗಾವಿ ಜಿಲ್ಲೆ, ಗೋಕಾಕ ತಾಲೂಕಿನ ಬೆಣಚಿನಮರ್ಡಿ ಗ್ರಾಮದ 15 ವರ್ಷದ ಬಾಲಕಿ ಕು|| ಜ್ಯೋತೆಕ್ಕಾ ಮು ಶಿಂಧಿಮರದ ಇವರಿಗೆ ಸಂಬಂಧಿಸಿದ್ದು, ಇವರಿಗೆ ಎರಡು ಬಾರಿ ಬಾಲ್ಯವಿವಾಹವಾಗಿದ್ದು, ಎರಡು ಬಾರಿ ಬಾಲಗರ್ಭಿಣಿಯಾಗಿ ಜನಿಸಿದ ಎರಡು ಮಕ್ಕಳು ಮರಣ ಹೊಂದಿರುವ ಮಾಹಿತಿಯನ್ವಯ ಪ್ರಕರಣದ ಕುರಿತು ದಿನಾಂಕ: 07.03.2025 ರಂದು ಬೆಳಗಾವಿ ತಾಲೂಕಿನ ಕಾಕತಿ ಪೊಲೀಸ್ ಠಾಣೆಯಲ್ಲಿ ಅಪರಾಧ ಸಂಖ್ಯೆ: 0051/2025 IPC 1860(U/s—376(3), 465, 468, 471); Prohibition of Child Marriage Act 2006 (U/s-9,10); Protection of children from Sexual Offences Act 2012 (U/s-4,6) ಕಾಯ್ದೆಯನ್ವಯ ಪ್ರಕರಣ ದಾಖಲು ಮಾಡಲಾಗಿರುತ್ತದೆ.

ಜಿಲ್ಲಾಧಿಕಾರಿಗಳು, ಬೆಳಗಾವಿ ಇವರ ಆದೇಶದಂತೆ, ತನಿಖಾ ತಂಡವನ್ನು ರಚನೆ ಮಾಡಿ ತನಿಖೆ ಮಾಡಲಾಗುತ್ತಿದ್ದು, ದಿನಾಂಕ: 08.03.2025 ರಂದು ಗೋಕಾಕ ತಾಲೂಕಿನ ಬೆಣಚಿನಮರ್ಡಿ ಗ್ರಾಮದ ಬಾಲಕಿಯ ಮನೆಗೆ ಭೇಟಿ ನೀಡಿದಾಗ, ಸದರಿ ಬಾಲಕಿ ಹಾಗೂ ಪೋಷಕರು ಇಲ್ಲದಿರುವುದು ಕಂಡು ಬಂದಿರುತ್ತದೆ ಹಾಗೂ ಬಾಲಕಿಯ ಗಂಡನ ಮನೆ ಬೆಳಗಾವಿ ತಾಲೂಕಿನ ಮುನ್ನಿಕೇರಿ ಗ್ರಾಮಕ್ಕೆ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಒಳಗೊಂಡ ತಂಡ ಮನೆಗೆ ಭೇಟಿ ಮಾಡಿ ಪರಿಶೀಲನೆ ಮಾಡಲಾಗಿದ್ದು, ಗಂಡನ ಮನೆಯಲ್ಲಿಯೂ ಸಹ ಯಾರು ಇಲ್ಲದಿರವುದು ಕಂಡುಬಂದಿರುತ್ತದೆ ಹಾಗೂ ಕಾಕತಿ ಪೊಲೀಸ್ ಠಾಣೆಯಲ್ಲಿ ಪ್ರಕರಣವು ತನಿಖಾ ಹಂತದಲ್ಲಿ ಇರುತ್ತದೆ.

ಜಿಲ್ಲಾ ಮಟ್ಟದ ಸಮಿತಿಯಿಂದ ತನಿಖೆಯು ಪ್ರಗತಿಯಲ್ಲಿದ್ದು, ಆಶಾ ಕಾರ್ಯಕರ್ತೆಯರ ಕರ್ತವ್ಯ ಲೋಪ ಹಾಗೂ ಇನ್ನಿತರ ನೌಕರರ ಬಗ್ಗೆ ತನಿಖಾ ವರದಿಯನ್ನು ಮತ್ತು ಪೊಲೀಸ್ ತನಿಖೆಯನ್ನು ಅಧರಿಸಿ ತಪ್ಪಿತ್ತಸ್ಥರ ವಿರುದ್ಧ ನಿಯಮನುಸಾರ ಕ್ರಮವಹಿಸಲಾಗುವುದು.

ರಾಜ್ಯ ಸರ್ಕಾರದಿಂದ ಬಾಲ್ಯವಿವಾಹವನ್ನು ತಡೆಗಟ್ಟಲು ಹಮ್ಮಿಕೊಂಡಿರುವ ಕಾರ್ಯಕ್ರಮಗಳ ವಿವರಗಳನ್ನು ಅನುಬಂಧದಲ್ಲಿರಿಸಿದೆ.

ಮಮಇ 35 ಮಭಾಬ 2025

(ಲಕ್ಷ್ಮೀ ಆರ್. ಹೆಬ್ಬಾಳ್ಕರ್)
ಮಹಿಳಾ ಮತ್ತುಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಹಾಗೂ ಹಿರಿಯ ನಾಗರೀಕರ
ಸಬಲೀಕರಣ ಸಚಿವರು.

Scanned with OKEN Scanner

ಅನುಬಂಧ

**ರಾಜ್ಯದಲ್ಲಿ ಬಾಲ್ಯವಿವಾಹವನ್ನು ತಡೆಯಲು ಸರ್ಕಾರ ಹಮ್ಮಿಕೊಂಡಿರುವ ಕಾರ್ಯಕ್ರಮಗಳ ವಿವರ ಈ ಕೆಳಗಿನಂತಿದೆ.**

- ಮಕ್ಕಳ ಸಹಾಯವಾಣಿ-1098 24*7 ಮಕ್ಕಳ ಸುರಕ್ಷತೆಗಾಗಿ ಕಾರ್ಯನಿರ್ವಹಿಸುತ್ತಿದೆ. ಬಾಲ್ಯವಿವಾಹ ಪ್ರಕರಣ ಸೇರಿದಂತೆ ಸಂಕಷ್ಟದಲ್ಲಿರುವ ಮಗುವಿನ ಬಗ್ಗೆ ಯಾವುದೇ ಸಮಯದಲ್ಲಿ ಕರೆ ಸ್ವೀಕೃತವಾದರೂ ತಕ್ಷಣ ಮಗುವನ್ನು ರಕ್ಷಿಸಲು ಸಂಬಂಧಿಸಿದ ಅಧಿಕಾರಿಗಳು ಕಾರ್ಯಪ್ರವೃತ್ತರಾಗಿರುತ್ತಾರೆ.

- ಮಕ್ಕಳ ರಕ್ಷಣಾ ಕಾರ್ಯಕ್ರಮಗಳ ಕುರಿತು ಮಾನ್ಯ ಇಲಾಖಾ ಸಚಿವರ ಸಂದೇಶವನ್ನು ಆಕಾಶವಾಣಿ ಮೂಲಕ ದಿ:16-09-2024 ರಿಂದ 15-10-2024ರ ವರೆಗೆ ಪ್ರಸಾರ ಮಾಡಲಾಗಿದೆ.

- ದಿನಾಂಕ: 11.08.2024 ರಿಂದ "ವಾತ್ಸಲ್ಯವಾಣಿ" ಎಂಬ 13 ವಾರಗಳ ಸರಣಿ ಕಾರ್ಯಕ್ರಮವನ್ನು ಆಕಾಶವಾಣಿ ಮೂಲಕ ಪ್ರಸಾರ ಮಾಡಲಾಗುತ್ತಿದ್ದು, ಈ ಕಾರ್ಯಕ್ರಮದಲ್ಲಿ ಮಾನ್ಯ ಇಲಾಖಾ ಸಚಿವರು, ಇಲಾಖಾ ಕಾರ್ಯದರ್ಶಿಗಳು, ನಿರ್ದೇಶಕರು ಸೇರಿದಂತೆ ಹಲವು ಅಧಿಕಾರಿಗಳು ಭಾಗವಹಿಸಿ ಜಾಗೃತಿ ಮೂಡಿಸಿದ್ದಾರೆ.

- ರಾಜ್ಯಾದ್ಯಂತ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಶಾಲೆಗಳು, ವಿವಿಧ ಇಲಾಖೆಗಳು ಮತ್ತು ಸಾರ್ವಜನಿಕರಿಗೆ ಒಟ್ಟು 697 ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು ಸುಮಾರು 575349 ಭಾಗೀದಾರರು ಸಾರ್ವಜನಿಕರು ಒಳಗೊಂಡಂತೆ ಪ್ರಯೋಜನ ಪಡೆದಿರುತ್ತಾರೆ. ಪ್ರತಿ ಜಿಲ್ಲೆಯಲ್ಲೂ ಮಕ್ಕಳ ಕಲ್ಯಾಣ ಸಮಿತಿ, ಬಾಲನ್ಯಾಯ ಮಂಡಳಿ, ಮಕ್ಕಳ ವಿಶೇಷ ಪೊಲೀಸ್ ಘಟಕ, ಮಕ್ಕಳ ಪಾಲನಾ ಸಂಸ್ಥೆ ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳು ಪಾಲನೆ/ ಪೋಷಣೆ ಅವಶ್ಯಕತೆ ಇರುವ ಮಕ್ಕಳು ಮತ್ತು ಕಾನೂನು ಸಂಘರ್ಷಕ್ಕೊಳಗಾದ ಮಕ್ಕಳ ಪುನರ್ವಸತಿಗೋಸ್ಕರ ಕಾರ್ಯನಿರ್ವಹಿಸುತ್ತಿವೆ.

- ಗ್ರಾಮ ಪಂಚಾಯತಿ ಮಟ್ಟದಲ್ಲಿ ಮಹಿಳೆಯರು ಮತ್ತು ಮಕ್ಕಳ ಸುರಕ್ಷತೆಗಾಗಿ ಮಹಿಳೆಯರ ಮತ್ತು ಮಕ್ಕಳ ಹಕ್ಕುಗಳ ಕಾವಲು ಸಮಿತಿಯನ್ನು ರಚಿಸಲಾಗಿದೆ.

- ಬಾಲಗರ್ಭಿಣಿಯರ ಪ್ರಕರಣಗಳಿಗೆ ಸಂಬಂಧಿಸಿದಂತೆ, ದಿನಾಂಕ: 06.09.2024 ರ ಸರ್ಕಾರದ ಆದೇಶದಂತೆ ಅಪ್ರಾಪ್ತ ವಯಸ್ಸಿನ ಹೆಣ್ಣುಮಕ್ಕಳು ಬಾಲಗರ್ಭಿಣಿಯರಾಗುವುದನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು ವಿವಿಧ ಇಲಾಖೆಗಳಿಗೆ ಜವಾಬ್ದಾರಿಗಳನ್ನು ನಿಗದಿಪಡಿಸಲಾಗಿದೆ.

- ಬಾಲಗರ್ಭಿಣಿಯರ ಪ್ರಕರಣಗಳನ್ನು ತಡೆಗಟ್ಟುವ ಸಂಬಂಧ ಪ್ರಸ್ತುತ ವರ್ಷ ಅಧಿಕಾರಿ/ ಸಿಬ್ಬಂದಿಗಳ ಸಾಮರ್ಥ್ಯಾಭಿವೃದ್ಧಿ ತರಬೇತಿ ಆಯೋಜಿಸಲು ಸರ್ಕಾರದ ಆದೇಶದಂತೆ ಸ್ವಯಂ ಸೇವಾ ಸಂಘದೊಂದಿಗೆ ಒಡಂಬಡಿಕೆ ಮಾಡಿಕೊಂಡು ಕ್ರಮವಹಿಸಲಾಗುತ್ತಿದೆ.

- ಲೈಂಗಿಕ ದೌರ್ಜನ್ಯಕ್ಕೊಳಗಾದ ಸಂತ್ರಸ್ಥ ಮಗುವಿಗೆ ಕಾನೂನು ಸಲಹೆ ಮತ್ತು ಆಪ್ತ ಸಮಾಲೋಚನೆಗಾಗಿ ಪ್ರತಿಯೊಂದು ಜಿಲ್ಲೆಯಲ್ಲೂ ಬೆಂಬಲ ವ್ಯಕ್ತಿಗಳನ್ನು ನೇಮಿಸಲು ಕ್ರಮವಹಿಸಲಾಗಿದೆ.

ನ್ಯಾಯಾಲಯಗಳಲ್ಲಿ ದಾಖಲಾಗುವ ಪ್ರಕರಣಗಳನ್ನು ಸರ್ಕಾರಿ ಅಭಿಯೋಜಕರು ಮತ್ತು ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ನಿರ್ವಹಿಸುತ್ತಾರೆ.

ಬಾಲ್ಯವಿವಾಹ ಮತ್ತು ದೌರ್ಜನ್ಯಗಳನ್ನು ತಡೆಯಲು ಹಾಗೂ ಕ್ರಮ ತೆಗೆದುಕೊಳ್ಳಲು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ/ ಮಕ್ಕಳ ರಕ್ಷಣಾ ನಿರ್ದೇಶನಾಲಯದ ಅಧಿಕಾರಿಗಳನ್ನು ಒಳಗೊಂಡಂತೆ ಈ ಕೆಳಕಂಡ ಇಲಾಖೆಯ ಅಧಿಕಾರಿಗಳನ್ನು ಬಾಲ್ಯವಿವಾಹ ನಿಷೇಧಾಧಿಕಾರಿಗಳೆಂದು (CMPOs) ನೇಮಿಸಲಾಗಿದೆ. ರಾಜ್ಯದಲ್ಲಿ ಈ ರೀತಿ ನೇಮಿಸಲಾದ ಸುಮಾರು 58000 ಕ್ಕಿಂತ ಹೆಚ್ಚು ಬಾಲ್ಯವಿವಾಹ ನಿಷೇಧಾಧಿಕಾರಿಗಳು ಇರುತ್ತಾರೆ.

- ಕಂದಾಯ ಇಲಾಖೆ
- ಕಾರ್ಮಿಕ ಇಲಾಖೆ
- ಶಿಕ್ಷಣ ಇಲಾಖೆ
- ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
- ಒಳಾಡಳಿತ ಇಲಾಖೆ
- ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
- ಸಮಾಜ ಕಲ್ಯಾಣ ಇಲಾಖೆ

ಮೇಲಿನ ಎಲ್ಲಾ ಇಲಾಖೆಗಳಿಗೆ ಸಂಬಂಧಿಸಿದ ಅಧಿಕಾರಿಗಳು ಬಾಲ್ಯವಿವಾಹ ನಿಷೇಧಕಾಯ್ದೆ 2006 ರ ಪ್ರಕಾರ ಕ್ರಮ ಕೈಗೊಳ್ಳಲು ಅಧಿಕಾರವಿರುತ್ತದೆ.

*****

Scanned with OKEN Scanr